**ಸಾಕ್ಷಿಯನ್ನು ದಿ:26.06.2018 ರಂದು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 2 ನೇ ಪ್ರತಿವಾದಿ ಪರ ಶ್ರೀಮತಿ ಎಸ್ ಬಿ ಎಸ್ ವಕೀಲರಿಂದಃ**

ನಿಪಿ-118 ರ ಮೊದಲನೇ ದಾಖಲೆಯಲ್ಲಿ ದಿನಾಂಕ ಮತ್ತು ವರ್ಷವನ್ನು ನಮೂದಿಸಿಲ್ಲ ಎಂದರೆ ಸರಿ. ಅದೇ ರೀತಿ ತಾಲ್ಲೂಕು ಮತ್ತು ಜಿಲ್ಲೆಯನ್ನು ನಮೂದಿಸಿಲ್ಲ ಎಂದರೆ ಸರಿ. ನಿಪಿ-118 ರ ಮೊದಲನೇ ದಾಖಲೆಯಲ್ಲಿ ಮಾಲೀಕರ ತಂದೆಯ ಹೆಸರನ್ನು ನಮೂದಿಸಿಲ್ಲ ಎಂದರೆ ಸರಿ. ಸಾಕ್ಷಿಯು ಮುಂದುವರೆದು, ಮೂಲ ದಾಖಲೆಗಳಲ್ಲಿ ಹೇಗೆ ಇದೆ ಅದರ ಯಥಾ ಪ್ರತಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ ಎಂದು ಹೇಳುತ್ತಾರೆ. ಅದೇ ರೀತಿ ನಿಪಿ-118 ರ ನಾಲ್ಕನೇ ದಾಖಲೆಯಲ್ಲಿ ಇಸವಿಯನ್ನು ತಿದ್ದಲಾಗಿದೆ ಎನ್ನುವ ಪ್ರಶ್ನೆಗೆ ಸಾಕ್ಷಿಯು ಮೂಲ ದಾಖಲೆಯಲ್ಲಿ ಹೇಗಿದೆಯೋ ಅದೇ ರೀತಿ ಪ್ರತಿಯನ್ನು ಹಾಜರುಪಡಿಸಿರುತ್ತೇನೆ ಎಂದು ಹೇಳುತ್ತಾರೆ. ಆ ದಾಖಲೆಯಲ್ಲಿ ದೊಡ್ಡ ಮಲ್ಲೇಗೌಡರ ತಂದೆ ಹೆಸರನ್ನು ನಮೂದಿಸಿಲ್ಲ ಎಂದರೆ ಸರಿ. ವಾದಿಯರ ಅನುಕೂಲಕ್ಕೋಸ್ಕರ ಅವರು ಕೇಳಿದಂತೆ ದಾಖಲೆಗಳನ್ನು ಪೂರೈಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಹಾಜರುಪಡಿಸಿರುವ ದಾಖಲೆಗಳಲ್ಲಿ ವಿಸ್ತೀರ್ಣವನ್ನು ನಮೂದಿಸಿಲ್ಲ ಎಂದರೆ ಸರಿಯಲ್ಲ. ವಾದಿಯರಿಗೆ ಸಹಾಯ ಮಾಡಲೆಂದು ಸುಳ್ಳು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ.

ನ್ಯಾಯಾಲಯದ ಪರವಾನಗಿ ಮೇರೆಗೆ ಮುಂದುವರೆದ ಮುಖ್ಯ ವಿಚಾರಣೆ ಃ ವಾದಿ ಪರ ವಕೀಲರಿಂದ

ದಿಃ 11.06.2018 ರಂದು ನನ್ನ ಮುಖ್ಯ ವಿಚಾರಣೆಯ ಸಮಯದಲ್ಲಿ ಖಾತೆ ನಂಬರನ್ನು ತಪ್ಪಾಗಿ 795 ಎಂದು ನಮೂದಿಸಲಾಗಿದ್ದು, ಆದರೆ ಖಾತೆ ನಂ. 295 ಎಂದು ಆಗಬೇಕು.

(1 ನೇ ಪ್ರತಿವಾದಿ ಮತ್ತು ಅವರ ಪರ ವಕೀಲರು ಹಾಜರಾಗದೇ ಇದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು)

ಹೆಚ್ಚಿನ ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಮರುವಿಚಾರಣೆಃ ಇಲ್ಲ.**

**(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೇ.ಸರಿ ಇದೆ,**

ಸಹಿ/-

**ಹೆಚ್ಚುವರಿ ಲಘು ವ್ಯವಹಾರಗಳ ಮತ್ತು ಸಿವಿಲ್**
**ನ್ಯಾಯಾಧೀಶರು (ಹಿ.ವಿ.), ಮೈಸೂರು**